# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1668 (1966)
ಸದಸ್ಯರ ಹೆಸರು : ಶ್ರೀ ಡಿ.ಎಸ್. ಅರುಣ್
ಉತ್ತರಿಸಬೇಕಾದ ದಿನಾಂಕ : 24.03.2026
ಉತ್ತರಿಸಬೇಕಾದ ಸಚಿವರು : ಪೌರಾಡಳಿತ ಮತ್ತು ಹಜ್ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅಕ್ರಮವಾಗಿ ನಿರ್ಮಾಣಗೊಂಡ ಕಟ್ಟಡಗಳು ಹಾಗೂ ಬಿ-ಖಾತಾ ಆಸ್ತಿಗಳಿಗೆ ಎ-ಖಾತಾ ನೀಡುವ ಕುರಿತು ಸರ್ಕಾರ ರೂಪಿಸಿರುವ ನೀತಿ ಏನು: | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ದಿನಾಂಕ:10-09-2024ರ ಪೂರ್ವದಲ್ಲಿ ಅನಧಿಕೃತವಾಗಿ ನಿರ್ಮಾಣವಾಗಿರುವ ಆಸ್ತಿಗಳಿಗೆ ಬಿ-ಖಾತಾ ನೀಡಲಾಗುತ್ತಿದೆ.<br><br>ಮುಂದುವರೆದು, ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಅನ್ನು ಉಲ್ಲಂಘಿಸಿ, ಅನಧಿಕೃತವಾಗಿ ರಚಿಸಿರುವ ಬಡಾವಣೆಗಳಲ್ಲಿನ ಬಿ-ಖಾತಾ ನಿವೇಶನ / ಕಟ್ಟಡ / ಅಪಾರ್ಟ್‌ಮೆಂಟ್ / ಫ್ಲಾಟ್‌ಗಳಿಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯುವ ಷರತ್ತಿಗೊಳಪಟ್ಟು ಎ-ಖಾತಾ ನೀಡಲು ಸರ್ಕಾರದ ಆದೇಶ ಸಂಖ್ಯೆ: ನಅಇ 178 ಜಿಇಎಲ್ 2025 (ಇ), ದಿನಾಂಕ 17.01.2026 ರಲ್ಲಿ ಅನುಮೋದನೆ ನೀಡಲಾಗಿದೆ. |
| ಆ) | ಅಕ್ರಮ ಕಟ್ಟಡಗಳಿಗೆ ಎ-ಖಾತಾ ನೀಡುವುದರಿಂದ ನಗರ ಯೋಜನೆ, ರಸ್ತೆ, ಒಳಚರಂಡಿ, ಕುಡಿಯುವ ನೀರು ಮತ್ತು ಇತರೆ ಮೂಲಸೌಕರ್ಯಗಳ ಮೇಲೆ ಹೆಚ್ಚುವರಿ ಒತ್ತಡ ಉಂಟಾಗುವ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ನಿರ್ವಹಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ವಿವರ ನೀಡುವುದು; | ಸರ್ಕಾರದ ಆದೇಶ ಸಂಖ್ಯೆ: ನಅಇ 178 ಜಿಇಎಲ್ 2025 (ಇ), ದಿನಾಂಕ 17.01.2026 ರನ್ವಯ ಅನಧಿಕೃತ ಸ್ವತ್ತುಗಳನ್ನು ಅಧಿಕೃತ ಸ್ವತ್ತುಗಳನ್ನಾಗಿ ಪರಿವರ್ತಿಸುವ ಸಂದರ್ಭದಲ್ಲಿ ಸದರಿ ಸ್ವತ್ತಿಗೆ ಸಂಪರ್ಕಿಸುವ ರಸ್ತೆಯನ್ನು ಸಾರ್ವಜನಿಕ ರಸ್ತೆ ಎಂದು ಘೋಷಿಸಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಕ್ರಮವಹಿಸಲಾಗುತ್ತಿದೆ.<br><br>ಮುಂದುವರೆದು, ಸದರಿ ಸ್ವತ್ತಿನ ಜಾಗವು ಭೂಪರಿವರ್ತನೆ ಆಗದಿದ್ದಲ್ಲಿ, ಸಕ್ಷಮ ಪ್ರಾಧಿಕಾರದಿಂದ ಭೂಪರಿವರ್ತನೆ ಮತ್ತು ವಿನ್ಯಾಸ ಅನುಮೋದನೆ ಪಡೆದ ನಂತರದಲ್ಲಿ ಎ-ಖಾತಾ (ಅಧಿಕೃತ ಖಾತಾ) ನೀಡಲಾಗುತ್ತಿದ್ದು, ಸಂಬಂಧಿಸಿದ ಶುಲ್ಕಗಳನ್ನು ಸ್ವತ್ತಿನ ಮಾಲೀಕರಿಂದ ಭರಿಸಿಕೊಳ್ಳಲಾಗುತ್ತಿದೆ. ಸದರಿ ಮೊತ್ತದಿಂದ ರಸ್ತೆ, ಒಳಚರಂಡಿ, ಕುಡಿಯುವ ನೀರು ಮತ್ತು ಇತರೆ ಮೂಲಸೌಕರ್ಯಗಳನ್ನು ಒದಗಿಸಲು ಕ್ರಮವಹಿಸಲಾಗುತ್ತಿರುವುದರಿಂದ ಹೆಚ್ಚುವರಿ ಒತ್ತಡ ಉಂಟಾಗಿರುವುದಿಲ್ಲ. |

| | | |
|---|---|---|
| ಇ) | ಅಕ್ರಮ ಕಟ್ಟಡಗಳ ನಿಯಂತ್ರಣದಲ್ಲಿ ನಗರ ಸ್ಥಳೀಯ ಸಂಸ್ಥೆಗಳು ವಿಫಲವಾದ ಹಿನ್ನಲೆಯಲ್ಲಿ ಹೊಣೆಗಾರ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡಿರುವುದೇ; ಭವಿಷ್ಯದಲ್ಲಿ ಹೊಸ ಅನಧಿಕೃತ ಕಟ್ಟಡ ನಿರ್ಮಾಣ ತಡೆಯಲು ಸರ್ಕಾರ ರೂಪಿಸಿರುವ ವ್ಯವಸ್ಥೆಯೇನು; | ನಗರ ಸ್ಥಳೀಯ ಯೋಜನಾ ಪ್ರದೇಶಗಳು / ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಅನಧಿಕೃತ ಬೆಳವಣಿಗೆಗಳನ್ನು ತಡೆಗಟ್ಟಲು ಪ್ರತಿ 15 ದಿನಗಳಿಗೊಮ್ಮೆ ಸ್ಥಳ ಪರಿಶೀಲನೆ ಮಾಡುವಂತೆ ಹಾಗೂ ಯಾವುದಾದರೂ ಅನಧಿಕೃತ ಬೆಳವಣಿಗೆ ಕಂಡುಬಂದಲ್ಲಿ ನಿಯಮಾನುಸಾರ ಅಗತ್ಯ ಕ್ರಮವಹಿಸುವಂತೆ, ತಪ್ಪಿದಲ್ಲಿ ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು / ಮುಖ್ಯಾಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮ ಜರುಗಿಸಲಾಗುವುದೆಂದು ಸರ್ಕಾರದ ಸುತ್ತೋಲೆ ದಿನಾಂಕ:16.06.2020 ರಲ್ಲಿ ಸೂಚಿಸಲಾಗಿದೆ.<br><br>ಮುಂದುವರೆದು, ದಿನಾಂಕ:11.02.2025 ರಂದು ಹೊರಡಿಸಲಾದ The Karnataka Municipalities Taxtaion (Amendment) Rules, 2025 ರಲ್ಲಿ ಕರ್ನಾಟಕ ಪೌರಸಭೆಗಳ ಕಾಯ್ದೆ 1964 ರ ಪ್ರಕರಣ 106ಕ್ಕೆ ತಿದ್ದುಪಡಿ ತರಲಾದ ಪ್ರಕರಣಗಳಲ್ಲಿ ಅಂದರೆ ದಿನಾಂಕ:10-09-2024 ರ ನಂತರ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನೆ ಕಾಯ್ದೆ 1961 ರ ಉಪಬಂಧಗಳನ್ನು ಅನುಸರಿಸಲು ವಿಫಲರಾದ ಮತ್ತು ಕಾನೂನು ಬಾಹಿರವಾಗಿ ರಚಿತವಾದ ನಿವೇಶನಗಳಿಗೆ ಹೊಸ PID ಅಥವಾ ಖಾತಾ ನೀಡುವುದನ್ನು ನಿಷೇಧಿಸಲಾಗಿದ್ದು, ತಪ್ಪಿದಲ್ಲಿ ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು / ಮುಖ್ಯಾಧಿಕಾರಿಗಳಿಗೆ ಪ್ರತಿ ಪ್ರಕರಣದಲ್ಲಿ ರೂ. 25,000/- ದಂಡ ಮತ್ತು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರಡಿ ಶಿಸ್ತು ಕ್ರಮ ಕೈಗೊಳ್ಳಲಾಗುತ್ತಿದೆ. |
| ಈ) | ಎ-ಖಾತಾ ನಿಯಮೀಕರಣ ಪ್ರಕ್ರಿಯೆಯಲ್ಲಿ ನಾಗರೀಕರಿಂದ ಹೆಚ್ಚುವರಿ ಶುಲ್ಕ ಅಥವಾ ದಂಡ ಸಂಗ್ರಹಿಸುವ ಕುರಿತು ಸರ್ಕಾರದ ನೀತಿ ಏನು; ಈ ಪ್ರಕ್ರಿಯೆಯನ್ನು ಪಾರದರ್ಶಕ ಹಾಗೂ ಆನ್‌ಲೈನ್ ಮೂಲಕ ಜಾರಿಗೆ ತರಲು ಸರ್ಕಾರ ಕೈಗೊಂಡ ಕ್ರಮಗಳೇನು? | ಬಿ-ಖಾತಾ ದಿಂದ ಎ-ಖಾತಾ ನೀಡಲು ಸಕ್ಷಮ ಪ್ರಾಧಿಕಾರಗಳ ಅನುಮೋದನೆ ಅಗತ್ಯವಿರುವುದರಿಂದ ಸಂಬಂಧಿಸಿದ ಪ್ರಾಧಿಕಾರಗಳು ವಿಧಿಸುವ ಶುಲ್ಕವನ್ನು ಅರ್ಜಿದಾರರು ಪಾವತಿಸಬೇಕಾಗುತ್ತದೆ.<br><br>ಸದರಿ ಪ್ರಕ್ರಿಯೆಯನ್ನು ಕೈಗೊಳ್ಳಲು ಆನ್‌ಲೈನ್ ತಂತ್ರಾಂಶವನ್ನು ರೂಪಿಸಲಾಗುತ್ತಿದ್ದು, ಪ್ರಕ್ರಿಯೆಯು ಜಾರಿಯಲ್ಲಿರುತ್ತದೆ. ಬಿ-ಖಾತಾ ದಿಂದ ಎ-ಖಾತಾ ನೀಡುವ ಸಂಬಂಧ ಶುಲ್ಕ ಅಥವಾ ದಂಡ ಸಂಗ್ರಹಿಸುವ ಪ್ರಕ್ರಿಯೆಯನ್ನು ಆನ್‌ಲೈನ್ ತಂತ್ರಾಂಶದ ಮೂಲಕವೇ ಕೈಗೊಳ್ಳಲಾಗುವುದು. |

**ಸಂಖ್ಯೆ: ನಅಇ 105 ಜಿಇಎಲ್ 2025 (ಇ)**

**(ರಹೀಂ ಖಾನ್)**
ಪೌರಾಡಳಿತ ಮತ್ತು ಹಜ್ ಸಚಿವರು